ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

24. ಜಂತಕಲ್ ಅಕ್ರಮ ಗಣಿಗಾರಿಕೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

606 (629) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತು ವಿಶೇಷ ತನಿಖಾ ತಂಡದಿಂದ ಕ್ರಿಮಿನಲ್ ಪ್ರಕರಣ ದಾಖಲಾಗಿರುವ ಎಷು ಐ.ಎ.ಎಸ್. ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಪ್ರಕರಣದಲ್ಲಿ ಭಾಗಿಯಾಗಿರುವ ಐ.ಪಿ.ಎಸ್ ಅಧಿಕಾರಿಗಳ ಸಂಖ್ಯೆ ಎಷ್ಟು; ಇವರ ಮೇಲೆ ಕ್ರಿಮಿನಲ್ ಪ್ರಕರಣ ಯಾವ ದಿನಾಂಕದಂದು ದಾಖಲಾಗಿದೆ;

(ಆ) ಐ.ಎ.ಎಸ್ ಮತ್ತು ಐ.ಪಿಎಸ್ ಅಧಿಕಾರಿಗಳ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣದ ಕುರಿತು ತನಿಖೆ ನಡೆಸಲು ಯಾವಾಗ ಅನುಮತಿ ನೀಡಲಾಗಿದೆ; ಅನುಮತಿ ನೀಡುವಂತೆ ಕೋರಿ ವಿಶೇಷ ತನಿಖಾ ತಂಡದಿಂದ ಸರಕಾರಕ್ಕೆ ಯಾವಾಗ ಮನವಿ ಸಲ್ಲಿಸಲಾಗಿದೆ; ಇನ್ನೂ ನೀಡಿಲ್ಲವೆಂದಾದಲ್ಲಿ ಯಾವಾಗ ನೀಡಲಾಗುವುದು;

(ಇ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದ ಅಕ್ರಮದಲ್ಲಿ ಭಾಗಿಯಾಗಿರುವ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಜಂತಕಲ್ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಅಕ್ರಮವೆಸಗಲು ಐ.ಎ.ಎಸ್ ಅಧಿಕಾರಿಯ ಪುತ್ರನ ಬ್ಯಾಂಕ್ ಖಾತೆಗೆ 20 ಲಕ್ಷ ಪಾವತಿಸಲಾಗಿದೆ ಎಂಬುದರ ಕುರಿತು ಸರ್ಕಾರದ ನಿಲುವೇನು?